ದಿನಾಂಕಃ 20.06.2026 ರಂದು ಪಿ.ಡಬ್ಲ್ಯೂ-1 ರವರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು. ಅವರು ತಮ್ಮ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಪಿ.ಡಬ್ಲ್ಯೂ-1 ರವರ ಮುಖ್ಯ ವಿಚಾರಣೆಯಾಗಿ ಪರಿಗಣಿಸಲು ಕೋರಿದ್ದು ಅವರ ಕೋರಿಕೆಯನ್ನು ಮನ್ನಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಕೆ ಎನ್ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ, ಅದಕ್ಕೆ ನಾನು ನನ್ನ ಸಹಿ ಮಾಡಿರುತ್ತೇನೆ.

1. ಸಾಲದ ಅರ್ಜಿ ಹಾಜರುಪಡಿಸಿದ್ದು ನಿಪಿ-1 ಎಂದು ಗುರುತಿಸಲಾಯಿತು.
2. ಕರಾರನ್ನು ಹಾಜರುಪಡಿಸಿದ್ದು ನಿಪಿ-2 ಎಂದು ಗುರುತಿಸಲಾಯಿತು.
3. ಘೋಷಣಾ ಪತ್ರ ಮತ್ತು Acknowledgement ಹಾಜರುಪಡಿಸಿದ್ದು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.
4. ಲೆಟರ್ ಆಫ್ ರಿವೈವಲ್ ಹಾಜರುಪಡಿಸಿದ್ದು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು.
5. ನೋಟೀಸ್ ಗಳನ್ನು ಹಾಜರುಪಡಿಸಿದ್ದು ನಿಪಿ-7 ಎಂದು ಗುರುತಿಸಲಾಯಿತು.
6. ರಶೀದಿ ಮತ್ತು ಸ್ವೀಕೃತಿಯನ್ನು ಹಾಜರುಪಡಿಸಿದ್ದು ನಿಪಿ-8 ಮತ್ತು 9 ಎಂದು ಗುರುತಿಸಲಾಯಿತು.
7. ಸ್ಟೇಟ್ಮೆಂಟನ್ನು ಹಾಜರುಪಡಿಸಿದ್ದು ನಿಪಿ-10 ಎಂದು ಗುರುತಿಸಲಾಯಿತು.

(ಪ್ರತಿವಾದಿ ಏಕಪಕ್ಷೀಯವಾಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು. )

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಸ್ನೇಹ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಆಲೂರು.